ಕರ್ನಾಟಕ ಸರ್ಕಾರ
ಜಿಲ್ಲಾ ಶಸ್ತ್ರ ಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ, ಚಿಕ್ಕಬಳ್ಳಾಪುರ

ಫೋನ್&ಫ್ಯಾಕ್ಸ್:08156 272388 email:dscbpur@gmail.com
ಸಂಖ್ಯೆ:ಜಿಆಚಿ/ಕೋವಿಡ್-19/ಟೆಂಡರ್01/2020-21 ದಿನಾಂಕ: 03.08.2020

## -:ಪ್ರಕಟಣೆ:-

ವಿಷಯ: ಕೋವಿಡ್-19 ಹಿನ್ನಲೆಯಲ್ಲಿ ಜಿಲ್ಲಾ ಆಸ್ಪತ್ರೆ ಚಿಕ್ಕಬಳ್ಳಾಪುರದಲ್ಲಿ ಖಾಲಿ ಇರುವ ಶುಶ್ರೂಷಕರು ಮತ್ತು ಲ್ಯಾಬ್ ಟೆಕ್ನೀಷಿಯನ್, ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಆಕುಕ 01 ಸಿ&ಆರ್ 2020 ಬೆಂಗಳೂರು, ದಿನಾಂಕ:14-07-2020.

************

ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯಾದ್ಯಂತ ಕೊರೋನಾ ವೈರಸ್ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಕೊರೋನಾ ವೈರಸ್ ಪ್ರಕರಣಗಳನ್ನು ಸಮರ್ಪಕವಾಗಿ ನಿಭಾಯಿಸಲು ಅರೆ ವೈದ್ಯಕೀಯ ಸಿಬ್ಬಂದಿಗಳ ಪಾತ್ರ ಮಹತ್ವದಾಗಿದ್ದು, ಆದರೆ ಪ್ರಸ್ತುತ ಇಲಾಖೆಯಲ್ಲಿ ಶುಶ್ರೂಷಕರು-36 ಮತ್ತು ಲ್ಯಾಬ್ ಟೆಕ್ನೀಷಿಯನ್-02, ಹುದ್ದೆಗಳು ಖಾಲಿ ಇದ್ದು, ಪ್ರಸ್ತುತ ಈ ಜಿಲ್ಲೆಯಲ್ಲಿ ಕೆಳಕಾಣಿಸಿರುವ ಹುದ್ದೆಗಳನ್ನು 6 ತಿಂಗಳ ಮಟ್ಟಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಈ ಕಛೇರಿಯಿಂದಲೇ ನೇರ ಸಂದರ್ಶನ ನಡೆಸಿ ದಾಖಲೆಗಳನ್ನು ಪರಿಶೀಲಿಸಿ ಮಾನ್ಯ ಜಿಲ್ಲಾಧಿಕಾರಿಗಳ ಸಹಮತದೊಂದಿಗೆ ನೇಮಿಸಿಕೊಳ್ಳಲು ಸೂಚಿಸಲಾಗಿರುವ ಮೇರೆಗೆ ರೋಸ್ಟರ್ ಕಂ ಮೆರಿಟ್ ಆಧಾರದಲ್ಲಿ 6 ತಿಂಗಳ ಅವಧಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. (www.chikkaballapur.nic.in)ರಲ್ಲಿ ದಿನಾಂಕ:10.08.2020 ರಂದು ಸಂಜೆ 5.00 ಗಂಟೆ ಒಳಗೆ ಅರ್ಜಿಗಳನ್ನು ಸಲ್ಲಿಸುವಂತೆ ಸೂಚಿಸಿದೆ ಹಾಗೂ ಮಾನ್ಯ ಜಿಲ್ಲಾಧಿಕಾರಿಗಳ ಸಮಕ್ಷಮದಲ್ಲಿ ದಿನಾಂಕ:11-08-2020 ರಂದು ಬೆಳಿಗ್ಗೆ 11.00 ಗಂಟೆಗೆ ಎಲ್ಲಾ ಅರ್ಜಿದಾರರು ಮೂಲ ದಾಖಲೆಗಳೊಂದಿಗೆ ಪರಿಶೀಲನೆಗಾಗಿ ಈ ಕಛೇರಿಗೆ ಹಾಜರಾಗತಕ್ಕದ್ದು.

| ಕ್ರ.ಸಂ | ಹುದ್ದೆಯ ವಿವರ | ಮಾಸಿಕ ವೇತನ | ನೇಮಕ ಮಾಡಿಕೊಳ್ಳಬೇಕಾದ ಸಂಖ್ಯೆ |
|---|---|---|---|
| 01 | ಶುಶ್ರೂಷಕರು | ರೂ.25000/- | 36 |
| 02 | ಪ್ರಯೋಗ ಶಾಲಾ ತಂತ್ರಜ್ಞರು | ರೂ.20000/- | 02 |

**ಷರತ್ತುಗಳು:-**

1. ಸದರಿ ಹುದ್ದೆಯ ನೇಮಕಾತಿಯು ತಾತ್ಕಾಲಿಕವಗಿ ಕರೋನಾ ಪ್ರಯುಕ್ತ 6 ತಿಂಗಳ ಮಟ್ಟಿಗೆ ಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲಾಗುವುದು.
2. **ಹುದ್ದೆಯ ವಿವರ:-**
   1. **ಶುಶ್ರೂಷಕರು:-**ಬಿಎಸ್‌ಸಿ ನರ್ಸಿಂಗ್/ಜಿಎನ್‌ಎಂ ತರಬೇತಿಯಲ್ಲಿ ತೇರ್ಗಡೆ/ಪದವಿ ಹೊಂದಿರಬೇಕು ಕೆ.ಎನ್.ಸಿ (ಕರ್ನಾಟಕ ನರ್ಸಿಂಗ್ ಕೌನ್ಸಿಲ್) ನಲ್ಲಿ ನೊಂದಣಿ ಆಗಿರಬೇಕು. ವಯಸ್ಸು ಕನಿಷ್ಠ 18 ವರ್ಷ ಗರಿಷ್ಠ 40 ವರ್ಷ ಮೀರಿರಬಾರದು. ಗಣಕಯಂತ್ರ ತರಬೇತಿ ಪೂರೈಸಿರಬೇಕು.

2. **ಪ್ರಯೋಗ ಶಾಲಾ ತಂತ್ರಜ್ಞರು**:-ಡಿ.ಎಂ.ಎಲ್.ಟಿ. ಪರೀಕ್ಷೆಯಲ್ಲಿ ತೇರ್ಗಡೆ/ಪದವಿ ಹೊಂದಿರಬೇಕು. ವಯಸ್ಸು ಕನಿಷ್ಠ 18 ವರ್ಷ ಗರಿಷ್ಠ 40 ವರ್ಷ ಮೀರಿರಬಾರದು. ಗಣಕ ಯಂತ್ರ ತರಬೇತಿ ಪೂರೈಸಿರಬೇಕು.

3.8.2020

(ಡಾ॥ ಪಿ.ವಿ.ರಮೇಶ್)
ಜಿಲ್ಲಾ ಶಸ್ತ್ರ ಚಿಕಿತ್ಸಕರು
ಜಿಲ್ಲಾ ಆಸ್ಪತ್ರೆ ಚಿಕ್ಕಬಳ್ಳಾಪುರ.

ಪ್ರತಿಯನ್ನು:

1. ಮಾನ್ಯ ಜಿಲ್ಲಾಧಿಕಾರಿಗಳು ಚಿಕ್ಕಬಳ್ಳಾಪುರ ಜಿಲ್ಲೆ ಚಿಕ್ಕಬಳ್ಳಾಪುರ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತಿ ಚಿಕ್ಕಬಳ್ಳಾಪುರ ಜಿಲ್ಲೆ ಚಿಕ್ಕಬಳ್ಳಾಪುರ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಚಿಕ್ಕಬಳ್ಳಾಪುರ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ಚಿಕ್ಕಬಳ್ಳಾಪುರ. ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಆಯುಕ್ತರು, ನಗರಸಭೆ, ಚಿಕ್ಕಬಳ್ಳಾಪುರ ಜಿಲ್ಲೆ ಚಿಕ್ಕಬಳ್ಳಾಪುರ. ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.